# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2012-13ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಮೂರನೇ ಕಂತಿನ ಅನುದಾನ ಬಿಡುಗಡೆ ಕುರಿತು

ಓದಲಾಗಿದೆ: ಕೆಎಸ್‌ಬಿಡಿಬಿರವರ ಪತ್ರ ದಿನಾಂಕ 19.01.2013

**ಪ್ರಸ್ತಾವನೆ**

2012-13ನೇ ಸಾಲಿನ ರಾಜ್ಯ ಆಯವ್ಯಯದಡಿ, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ₹ 1000.00 ಲಕ್ಷಗಳನ್ನು ನಿಗದಿ ಪಡಿಸಲಾಗಿದ್ದು, ಈ ಪೈಕಿ ಈಗಾಗಲೇ ಮೊದಲನೇ ಕಂತಿನ ಅನುದಾನ ₹ 500.00 ಲಕ್ಷಗಳನ್ನು ಕರ್ನಾಟಕ ಜೈವಿಕ ಇಂಧನ ನೀತಿ ಅನುಷ್ಠಾನಕ್ಕಾಗಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಬಿಡುಗಡೆ ಮಾಡಲಾಗಿದ್ದು, ಇನ್ನುಳಿದ ಅನುದಾನದ ಪೈಕಿ, ಮೇಲೆ ಓದಲಾದ ಪತ್ರದನ್ವಯ, ಮೂರನೇ ಕಂತಿನ ಅನುದಾನ ₹ 250.00 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2501-04-105-0-03-059(ಯೋಜನೆ)ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 20 ಜೈಅಯೋ 2012, ಬೆಂಗಳೂರು, ದಿನಾಂಕ 27.02.2013**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ₹ 250.00 ಲಕ್ಷಗಳನ್ನು (ರೂ.ಇನ್ನೂರ ಐವತ್ತು ಲಕ್ಷಗಳು ಮಾತ್ರ) ಮೂರನೇ ಕಂತಿನ ಅನುದಾನವನ್ನಾಗಿ ಜೈವಿಕ ಇಂಧನ ಅಭಿವೃದ್ಧಿಗಾಗಿ ಮಾತ್ರ ವಿನಿಯೋಗಿಸಲು ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರಿಗೆ ಲೆಕ್ಕ ಶೀರ್ಷಿಕೆ 2501-04-105-0-03-059(ಯೋಜನೆ)ರಡಿ ಈ ಕೆಳಕಂಡ ನಿಬಂಧನೆಗೊಳಪಟ್ಟು ಬಿಡುಗಡೆ ಮಾಡಿದೆ.

ಸದರಿ ಅನುದಾನವು ಹಂಗಾಮಿಯಾಗಿದ್ದು, ಮಹಾಲೇಖಪಾಲರ ಲೆಕ್ಕ ತಪಾಸಣೆಗೊಳಪಟ್ಟಿದ್ದು, ಉದ್ದೇಶಿತ ಕಾರ್ಯಕ್ರಮಕ್ಕಾಗಿ ವಿನಿಯೋಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರ್ಯಾಂಟ್ - ಇನ್ - ಏಡ್ ಬಿಲ್ಲನ್ನು ಸಲ್ಲಿಸಿ ನಿರ್ದೇಶಕರು (ಗ್ರಾಮೂಸೌ) ಹಾಗೂ ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ ರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಹಾಲಿ ಬಿಡುಗಡೆ ಮಾಡುತ್ತಿರುವ ಅನುದಾನವನ್ನು ಇಲಾಖಾ ಅಂತರಿಕ ಆರ್ಥಿಕ ಸಲಹೆಗಾರರ ಸಹಮತಿ ಸಂಖ್ಯೆ ಗ್ರಾಅಪ 78 ಪಿಬಿಎಸ್ 2013 ದಿನಾಂಕ 07.02.2013 ರಲ್ಲಿ ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

27/2/13

**(ಎಂ.ದೀಪಾ)**
ನಿರ್ದೇಶಕರು(ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಉಪಕಾರ್ಯದರ್ಶಿ
ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ :

1. ಮಹಾಲೇಖಪಾಲರು, ಕರ್ನಾಟಕ , ಬೆಂಗಳೂರು
2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ಬೆಂಗಳೂರು
4. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು(ಪಂ.ರಾಜ್) ರವರ ಆಪ್ತ ಕಾರ್ಯದರ್ಶಿ,ಗ್ರಾ.ಅ. ಮತ್ತು ಪಂಚಾಯತ್ ರಾಜ್ ಇಲಾಖೆ,
6. ನೆಟ್‌ವರ್ಕ ಮ್ಯಾನೇಜ್‌ಮೆಂಟ್ ಸೆಂಟರ್ ನಂ:49 ಸೆಕೆಂಡ್ ಬ್ಲಾಕ್, ಸೆಕೆಂಡ್ ಫ್ಲೋರ್, ಖನಿಜ ಭವನ, ಸೌತ್ ಎಂಟ್ರೆನ್ಸ್, ರೇಸ್ ಕೋರ್ಸ್ ರಸ್ತೆ,ಬೆಂಗಳೂರು.
7. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.